ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 22-02-2017

# ಪತ್ರಿಕಾ ಆಮಂತ್ರಣ

1. ಕರ್ನಾಟಕ ಜಾನಪದ ಅಕಾಡೆಮಿ ಪಶಸ್ತಿ ಪ್ರದಾನ ಸಮಾರಂಭ:

ಪ್ರಶಸ್ತಿ ಪ್ರದಾನ:
ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಚೆಕ್ ವಿತರಣೆ:
ಶ್ರೀಮತಿ ಉಮಾಶ್ರೀ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.

ಘನ ಉಪಸ್ಥಿತಿ:
ಅನಂತರ ಕುಮಾರ್,
ರಸಾಯನಿಕ/ರಸಗೊಬ್ಬರ ಮತ್ತು ಸಂಸದೀಯ ವ್ಯವಹಾರಗಳ ಕೇಂದ್ರ ಸಚಿವರು.

ಅಕಾಡೆಮಿಯ ವೆಬ್‌ಸೈಟ್‌ಗೆ ಚಾಲನೆ:

ಕೆ.ಜೆ. ಜಾರ್ಜ್, ಬೆಂಗಳೂರು ಅಭಿವೃದ್ಧಿ ಸಚಿವರು.

ದಿನಾಂಕ : 23-02-2017, ಗುರುವಾರ ಸಮಯ : ಸಂಜೆ 6.30 ಗಂಟೆಗೆ.

ಸ್ಥಳ: ಸಂಸ ಬಯಲು ರಂಗಮಂದಿರ, ರವೀಂದ್ರ ಕಲಾಕ್ಷೇತ್ರ ಆವರಣ, ಬೆಂಗಳೂರು.

2. ಬೈಬಲ್ ಮಾದರಿಯ ವಚನ ಸಂಪುಟಗಳ ಲೋಕಾರ್ಪಣೆ:
ಬಸವಶ್ರೀ ಸಿದ್ದರಾಮ ಶರಣರು ಬೆಲ್ದಾಳ
ಅಧ್ಯಕ್ಷರು, ಬಸವ ಮಹಾಮನೆ ಸಂಸ್ಥೆ, ಬಸವಕಲ್ಯಾಣ

ಕನ್ನಡ ಪುಸ್ತಕ ಪ್ರಾಧಿಕಾರದ ವಿವಿಧ ಪುಸ್ತಕಗಳ ಲೋಕಾರ್ಪಣೆ –
ಪ್ರೊ. ಎಸ್.ಜಿ. ಸಿದ್ಧರಾಮಯ್ಯ,
ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು

ಅಧ್ಯಕ್ಷತೆ:
ಡಾ: ಬಂಜಗೆರೆ ಜಯಪ್ರಕಾಶ
ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ
ಮುಖ್ಯ ಅತಿಥಿಗಳು:
ಡಾ: ಮನು ಬಳಿಗಾರ್
ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು

ದಿನಾಂಕ: 23-02-2017 ಗುರುವಾರ ಬೆಳಿಗ್ಗೆ 11-00 ಗಂಟೆಗೆ
ಸ್ಥಳ:" ಸಾಂಸ್ಕೃತಿಕ ಸಮುಚ್ಛಯ", ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು

## ಪತ್ರಿಕಾ ಪ್ರಕಟಣೆ

# ಹಸುವಿನ ಹಾಲು ಉತ್ಪಾದನೆಯಲ್ಲಿ ಕರ್ನಾಟಕ ಪ್ರಥಮ

ಸಚಿವ – ಎ. ಮಂಜು

ಬೆಂಗಳೂರು, ಫೆಬ್ರವರಿ 22 , (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಹಸುವಿನ ಹಾಲು ಉತ್ಪಾದನೆಯಲ್ಲಿ ರಾಷ್ಟ್ರದಲ್ಲೇ ಪ್ರಥಮ ಸ್ಥಾನವನ್ನು ಪಡೆದಿದೆ, ಒಟ್ಟಾರೆ ಹಾಲು ಉತ್ಪಾದನೆಯಲ್ಲಿ ದೇಶದಲ್ಲೇ ಎರಡನೇ ಸ್ಥಾನ ಪಡೆದಿದೆ ಎಂದು ಪಶುಸಂಗೋಪನಾ ಮತ್ತು ರೇಷ್ಮೆ ಇಲಾಖೆಯ ಸಚಿವ ಎ, ಮಂಜು ಅವರು ತಿಳಿಸಿದರು.

ಇಂದು ಬೆಂಗಳೂರಿನ ಹೆಬ್ಬಾಳ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಯ ಅತ್ಯಾಧುನಿಕ ಲಸಿಕಾ ತಯಾರಿಕಾ ಪ್ರಯೋಗಾಲಯದ ಕಡ್ಡಡದ ಶಂಕುಸ್ಥಾಪನೆ ನೆರವೇರಿಸಿ ಅವರು ಪತ್ರಕರ್ತರೊಂದಿಗೆ ಮಾತನಾಡುತ್ತಾ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆ ಲಸಿಕೆ ಅಭಿವೃದ್ಧಿ, ತಯಾರಿಕೆ, ಸರಬರಾಜು ಮತ್ತು ರೋಗ ತಪಾಸಣಾ ಕ್ಷೇತ್ರದಲ್ಲಿ ಒಂದು ಅತ್ಯುತ್ತಮವಾದ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. ಜಾನುವಾರುಗಳಿಗೆ ತಗಲುವ ರೋಗದ ನಿಯಂತ್ರಣಕ್ಕಾಗಿ ವರ್ಷಕ್ಕೆ 2 ಬಾರಿ ಲಸಿಕೆಯನ್ನು ಹಾಕಲಾಗುತ್ತಿದೆ.

ಜಾನುವಾರುಗಳಿಗೆ ವಿವಿಧ 14 ರೀತಿಯ ರೋಗಗಳು ಕಂಡುಬಂದಿದ್ದು ಹಿಂದಿನ ದಿನಗಳಲ್ಲಿ ಲಸಿಕೆಗಳನ್ನು ಹೊರ ರಾಜ್ಯಗಳಿಂದ ತರಿಸಿ ಹಾಕಲಾಗುತ್ತಿತ್ತು. ಇದೀಗ ನಮ್ಮ ವಿಜ್ಞಾನಿಗಳು ರಾಜ್ಯದಲ್ಲೇ ಈ ವಿವಿಧ ರೋಗಗಳಿಗೆ ಲಸಿಕೆಗಳನ್ನು ಕಂಡು ಹಿಡಿದು ನಮ್ಮ ರಾಜ್ಯದ ಲಸಿಕೆಯನ್ನೇ ಜಾನುವಾರುಗಳಿಗೆ ಹಾಕಲಾಗುತ್ತಿದೆ ಎಂದರು.

ಜಾನುವಾರು ಆರೋಗ್ಯ ಸುರಕ್ಷಾ ಕವಚ ಎಂಬ ಯೋಜನೆಯಡಿ ಈಗಾಗಲೇ ಕುರಿ, ಪ್ರಾಣಿಜನ್ಯ ರೋಗಗಳ ಆತ್ಯಾಧುನಿಕ ಲಸಿಕೆ ಉತ್ಪಾದನೆ ಸೌಲಭ್ಯ ಸ್ಥಾಪನೆಗೆ ರಾಜ್ಯ ಸರ್ಕಾರ

ಮಂಜೂರಾತಿ ನೀಡಿದೆ. ಈ ಲಸಿಕೆ ಉತ್ಪಾದನೆ ಸೌಲಭ್ಯವನ್ನು ಅಂತರರಾಷ್ಟ್ರೀಯ ಮಾನದಂಡಗಳಿಗೆ ಅನುಗುಣವಾಗಿ ನಿರ್ಮಾಣ ಮಾಡಲಾಗಿದೆ ಎಂದು ತಿಳಿಸಿದರು.

ಸಂಸ್ಥೆಯು ರೈತರಿಗೆ ಮತ್ತು ರಾಜ್ಯದ ಪಶುವೈದ್ಯರಿಗೆ ರೋಗ ನಿರ್ಣಯದ ಸೌಲಭ್ಯಗಳನ್ನು ಕೇಂದ್ರೀಯ ಪ್ರಯೋಗಾಲಯ ಮತ್ತು ಮಾಹಿತಿ ಕೇಂದ್ರಗಳ ಸಹಯೋಗದೊಂದಿಗೆ ನಿರ್ವಹಿಸುತ್ತಿದ್ದು, ಜೊತೆಗೆ ವನ್ಯಜೀವಿಗಳ ರೋಗ ನಿರ್ಣಯ ಮಾಡಲು ಪ್ರಯೋಗಾಲಯವನ್ನು ಪ್ರತ್ಯೇಕವಾಗಿ ಬನ್ನೇರುಘಟ್ಟ ಜೈವಿಕ ಉದ್ಯಾನದಲ್ಲಿ ಸ್ಥಾಪಿಸಿದೆ. ಈ ಪ್ರಯೋಗಾಲಯಗಳು ಲಸಿಕೆ ವಿತರಣೆಯಲ್ಲಿ ಪ್ರಮುಖ ಪಾತ್ರ ವಹಿಸಿವೆ ಹಾಗೂ ರೈತರ ಮನೆಬಾಗಿಲಿಗೆ ಹೋಗಿ ರೋಗ ನಿರ್ಣಯ ಸೌಕರ್ಯವನ್ನು ಒದಗಿಸುವ ಮೂಲಕ ರೋಗ ಹರಡುವಿಕೆಯನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರ ವಹಿಸಿವೆ ಎಂದರು.

ಈ ಕಾರ್ಯಕ್ರಮದಲ್ಲಿ ಹೆಬ್ಬಾಳ ಕ್ಷೇತ್ರ ಶಾಸಕ ವೈ. ಎ. ನಾರಾಯಣಸ್ವಾಮಿ ಹಾಗೂ ಪಶು ಸಂಗೋಪನಾ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್‌ಎಂ:ಕೆಎನ್‌ವಿ:ಜಿಪಿಆರ್.

## ಮಳೆಗಾಲದ ಆರಂಭದ ಒಳಗಾಗಿ ಕೃಷಿಭಾಗ್ಯ ಯೋಜನೆಯಡಿ ಇನ್ನೂ 50 ಸಾವಿರ ಕೃಷಿ ಹೊಂಡಗಳ ನಿರ್ಮಾಣ – ಕೃಷ್ಣಬೈರೇಗೌಡ

ಬೆಂಗಳೂರು, ಫೆಬ್ರವರಿ 22 , (ಕರ್ನಾಟಕ ವಾರ್ತೆ)

ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಸಂಗ್ರಹವಾಗುವ ಹಸಿಕಸದಿಂದ ತಯಾರಿಸಲಾಗುವ ಗೊಬ್ಬರವನ್ನು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳ ರೈತರಿಗೆ ಶೇ 50 ರ ರಿಯಾಯಿತಿ ದರದಲ್ಲಿ ಒದಗಿಸುವ ಯೋಜನೆ ರೂಪಿಸಲಾಗಿದೆ. ಆಸಕ್ತ ರೈತರು ಮುಂಗಡ ಪಾವತಿಸಿ ರೈತ ಸಂಪರ್ಕ ಕೇಂದ್ರದಲ್ಲಿ ತಮ್ಮ ಬೇಡಿಕೆಯನ್ನು ನೋಂದಾಯಿಸಿಕೊಳ್ಳಬಹುದು ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಮಹಾತ್ವಾಂಕ್ಷಿ ಯೋಜನೆಯಾದ "ಕೃಷಿಭಾಗ್ಯ" ದಡಿ ಕೃಷಿ ಹೊಂಡಕ್ಕೆ ರೈತರಿಂದ ಬೇಡಿಕೆ ಹೆಚ್ಚಾಗಿ ಬರುತ್ತರುವ ಹಿನ್ನೆಲೆಯಲ್ಲಿ ಈ ವರ್ಷದ ಮಳೆಗಾಲದ ಆರಂಭದ ಒಳಗಾಗಿ ಇನ್ನೂ 50 ಸಾವಿರ ಕೃಷಿ ಹೊಂಡಗಳನ್ನು ನಿರ್ಮಾಣ ಮಾಡಲು ಮುಖ್ಯಮಂತ್ರಿ ಅವರು ಒಪ್ಪಿಗೆ ನೀಡಿದ್ದು, ಇದಕ್ಕೆ ತಗಲುವ ಹೆಚ್ಚುವರಿ ಹಣವನ್ನು ಬಿಡುಗಡೆ ಮಾಡಲು ಸಮ್ಮತಿಸಿದ್ದಾರೆ ಎಂದು ಕೃಷಿ ಸಚಿವ ಕೃಷ್ಣಬೈರೇಗೌಡ ಅವರು ಪ್ರಕಟಿಸಿದರು.

ವಿಕಾಸಸೌಧದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು ಮಾರ್ಚ್ ಅಂತ್ಯದ ಒಳಗಾಗಿ ಇನ್ನೂ 30 ಸಾವಿರ ಕೃಷಿ ಹೊಂಡಗಳನ್ನು ರೈತರ ಜಮೀನಿನಲ್ಲಿ ನಿರ್ಮಾಣ ಮಾಡಲು ಅವಕಾಶ ಕಲ್ಪಿಸಿಕೊಡಲಾಗುವುದು ಎಂದು ಸಚಿವರು ತಿಳಿಸಿದರು.

ಆಸಕ್ತಿಯುಳ್ಳ ರೈತರು ಸ್ಥಳೀಯ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಿ ಈ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ರೈತ ಸಮುದಾಯಕ್ಕೆ ಸಚಿವರು ಮನವಿ ಮಾಡಿದರು.

ರಾಜ್ಯದಲ್ಲಿ ಮಳೆ ಕೊರತೆಯಿಂದ ಅತಿಹೆಚ್ಚು ರೈತರು ಕೃಷಿ ಹೊಂಡಗಳನ್ನು ನಿರ್ಮಾಣ ಮಾಡಿ ತಮ್ಮ ಆರ್ಥಿಕ ಸ್ಥಿತಿಯನ್ನು ಸುಧಾರಿಸಿಕೊಂಡಿರುವ  ಬಗ್ಗೆ ಕೆಲವು ಕೃಷಿ ವಿಶ್ವವಿದ್ಯಾಲಯಗಳು ಸಮೀಕ್ಷೆ ಮಾಡಿ ವರದಿ ಮಾಡಿದೆ ಎಂದು ಕೃಷಿ ಸಚಿವ ಬೈರೇಗೌಡ ಹೇಳಿದರು.

ಬೆಂಗಳೂರು ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ಸುಮಾರು 5 ಸಾವಿರ ಟನ್ ಸಾವಯವ ಗೊಬ್ಬರದ ದಾಸ್ತಾನು ಇದ್ದು ಇದನ್ನು ರೈತರ ಹೊಲಗಳಿಗೆ ನೇರವಾಗಿ ಪ್ರತಿ ಟನ್ನಿಗೆ ಶೇ 50 ರಷ್ಟು ಸಬ್ಸಿಡಿ ದರದಲ್ಲಿ ನೀಡಲಾಗುತ್ತದೆ.  ಈ ಯೋಜನೆಯಡಿ ರೈತರು ಪ್ರತಿ ಟನ್ನಿಗೆ 800 ರೂ ಹಣವನ್ನು ಪಾವತಿ ಮಾಡಿದಲ್ಲಿ ಕೃಷಿ ಇಲಾಖೆಯೇ ರೈತರ ಹೊಲಕ್ಕೆ ಗೊಬ್ಬರ ಸರಬರಾಜು ಮಾಡುವುದು  ಎಂದರು.

ಈ ವರ್ಷಾಂತ್ಯಕ್ಕೆ ರಾಜ್ಯದ ಎಲ್ಲಾ ರೈತರಿಗೆ ಮಣ್ಣಿನ  ಆರೋಗ್ಯದ ಕಾರ್ಡುಗಳನ್ನು ವಿತರಣೆ ಮಾಡುವುದರ ಜೊತೆಗೆ ಆಯಾ ಪ್ರದೇಶಗಳಲ್ಲಿ ಮಣ್ಣಿನ ಪೌಷ್ಟಿಕಾಂಶಕ್ಕೆ ತಕ್ಕಂತೆ ಐದು ಬೆಳೆಗಳನ್ನು ಬೆಳೆಯಲು ಮಣ್ಣಿನ ಆರೋಗ್ಯ ಕಾರ್ಡುಗಳಲ್ಲಿ ಶಿಫಾರಸ್ಸು ಮಾಡಲಾಗುವುದು ಎಂದರು.

ರಾಜ್ಯದಲ್ಲಿ ತೀವ್ರ ಬರಗಾಲದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಇದುವರೆಗೆ ಒಂದು ಸಾವಿರ ಕೋಟಿ ರೂ. ನಷ್ಟು ಹಣವನ್ನು ಕುಡಿಯುವ ನೀರು ಮತ್ತು ಮೇವು ಬ್ಯಾಂಕುಗಳಿಗೆ ವೆಚ್ಚಮಾಡಿದೆ.  ಮುಂದಿನ ಮಳೆಗಾಲದ ಆರಂಭದವರೆಗೆ ಜನರಿಗೆ, ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಲು ಸರ್ಕಾರ ಅಗತ್ಯಕ್ರಮ ಕೈಗೊಳ್ಳಲಿದೆ ಎಂದು ಕೃಷಿ ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

ರಾಜ್ಯದಲ್ಲಿ ಮೇವಿನ ಕೊರತೆ ನೀಗಿಸಲು ನೆರೆಯ ರಾಜ್ಯದಿಂದ ಲಭ್ಯವಿರುವ ಮೇವನ್ನು ಖರೀಸಿದಿ ರೈತರಿಗೆ ವಿತರಿಸಲು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ಸಚಿವರು ಹೇಳಿದರು.

ಎಸ್‌ಎಂ:ಕೆಪಿಪಿ::ಜಿಪಿಆರ್.

## ಸಾಮಾಜಿಕ ಭದ್ರತಾ ಪಿಂಚಣಿ ಫಲಾನುಭವಿಗಳು ತಮ್ಮ ಬದಲಾದ ವಿಳಾಸದ ಮಾಹಿತಿ ಹಾಗೂ ಆಧಾರ್ ಸಂಖ್ಯೆ ಸಲ್ಲಿಸಲು ಸೂಚನೆ

ಬೆಂಗಳೂರು, ಫೆಬ್ರವರಿ 22 , (ಕರ್ನಾಟಕ ವಾರ್ತೆ)

ಸಾಮಾಜಿಕ ಭದ್ರತಾ ಯೋಜನೆಗಳಡಿ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳು ತಮ್ಮ ವಾಸಸ್ಥಳ/ವಿಳಾಸ ಬದಲಾವಣೆ ಮಾಡಿದ್ದಲ್ಲಿ ತಮ್ಮ ವ್ಯಾಪ್ತಿಯ ಕಂದಾಯ ಅಧಿಕಾರಿಗಳಿಗೆ ಬದಲಾದ ವಿಳಾಸದ ಮಾಹಿತಿಯನ್ನು ಪಿಂಚಣಿ ಮಂಜೂರಾತಿ ನಿಯಮ 28 ರನ್ವಯ ಕಡ್ಡಾಯವಾಗಿ ಸಲ್ಲಿಸಬೇಕು.

ಕೇಂದ್ರ ಸರ್ಕಾರದ ನೇರ ಹಣ ಸಂದಾಯ ಯೋಜನೆ (ಡಿ.ಬಿ.ಟಿ) ಯಡಿ, ಪ್ರತಿ ಫಲಾನುಭವಿಯು ಸರ್ಕಾರದ ಸವಲತ್ತುಗಳನ್ನು ಪಡೆಯಲು ಆಧಾರ್ ಸಂಖ್ಯೆ, ಬ್ಯಾಂಕ್/ಅಂಚೆ ಖಾತೆ ಸಂಖ್ಯೆ ಮತ್ತು ಆಧಾರ್ ಜೋಡಣೆಗೆ ಒಪ್ಪಿಗೆ ನೀಡುವುದು ಕಡ್ಡಾಯವಾಗಿದೆ.

ಇದಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳು ತಮ್ಮ ವಾಸಸ್ಥಳ ಬದಲಾಣೆ ಮಾಡಿದಲ್ಲಿ ಬದಲಾದ ವಿಳಾಸದ ಜೊತೆಗೆ ಆಧಾರ್ ಸಂಖ್ಯೆ, ಬ್ಯಾಂಕ್/ಖಾತೆ ವಿವರ ಮತ್ತು ಮೊಬೈಲ್ ಸಂಖ್ಯೆಯನ್ನು ಆಧಾರ್ ಜೋಡಣೆಯ ಒಪ್ಪಿಗೆ ಪತ್ರದೊಂದಿಗೆ ತಮ್ಮ ವ್ಯಾಪ್ತಿಯ ಕಂದಾಯ ಅಧಿಕಾರಿಗಳಿಗೆ ಫೆಬ್ರವರಿ 28 ರೊಳಗೆ ಖುದ್ದಾಗಿ ಸಲ್ಲಿಸಲು ಈ ಮೂಲಕ ಸೂಚನೆ ನೀಡಿದೆ. ಇಲ್ಲವಾದ್ದಲ್ಲಿ ಮುಂದಿನ ದಿನಗಳಲ್ಲಿ ಪಿಂಚಣಿ ಪಾವತಿಯನ್ನು ನಿಲ್ಲಿಸಲಾಗುವುದು ಎಂದು ಕಂದಾಯ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಸ್ಕೌಟ್ಸ್ ಮತ್ತು ಗೈಡ್ಸ್ ಜೀವನದ ಕಲೆ

ಬೆಂಗಳೂರು, ಫೆಬ್ರವರಿ 22, (ಕರ್ನಾಟಕ ವಾರ್ತೆ)

ಕರ್ನಾಟಕದಲ್ಲಿ ಪ್ರಸ್ತುತ 4.5 ಲಕ್ಷ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿದ್ದು ಮುಂದಿನ ವರ್ಷದೊಳಗೆ 10 ಲಕ್ಷ ವಿದ್ಯಾರ್ಥಿಗಳನ್ನು ಸೇರಿಸುವ ಗುರಿ ಹೊಂದಲಾಗಿದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಅವರು ತಿಳಿಸಿದರು.

ಇಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ವಿಭಾಗ ಹಮ್ಮಿಕೊಂಡಿದ್ದ ಲಾರ್ಡ್ ಬೇಡನ್ ಪಾವೆಲ್ ಮತ್ತು ಲೇಡಿ ಬೇಡನ್ ಪಾವೆಲ್ ದಂಪತಿಗಳ ಹುಟ್ಟು ಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ವಿಶ್ವ ಚಿಂತನಾ ಮತ್ತು ಭಾತೃತ್ವ ದಿನಾಚರಣೆ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ರಾಜ್ಯದಲ್ಲಿ 15,000 ಶಿಕ್ಷಕರು ಯಾವುದೇ ಭತ್ಯೆಯನ್ನು ಪಡೆಯದೆ ಸ್ವಯಂ ಪ್ರೇರಣೆಯಿಂದ ಸ್ಕೌಟ್ಸ್ ಮತ್ತು ಗೈಡ್ಸ್ ನಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ಸೇವೆಯನ್ನು ಇಂದು ನಾವು ಸ್ಮರಿಸುತ್ತೇವೆ ಎಂದು ನುಡಿದರು.

ರಾಜ್ಯದ 33 ಶೈಕ್ಷಣಿಕ ಜಿಲ್ಲೆಗಳಲ್ಲಿ ಹಾಗೂ 175 ವಿವಿಧ ಸಂಘ ಸಂಸ್ಥೆಗಳು ಇಂದು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಜೀವನದ ಶಿಸ್ತನ್ನು ಸ್ಕೌಟ್ಸ್ ಮತ್ತು ಗೈಡ್ಸ್ ಕಲಿಸುತ್ತದೆ. ಶಾಂತಿಯ ದೂತರಾಗಿರುವ ನಮ್ಮ ಮಕ್ಕಳು ಸತ್ಪ್ರಜೆಗಳಾಗಿ ಬೆಳೆಯಲು ಇದರ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಜಾಗತೀಕರಣ ಮನುಷ್ಯರ ಹೃದಯದಲ್ಲಾಗಬೇಕು. ಹೃದಯ ಒಂದಾಗಿಸುವ ಕಾರ್ಯವನ್ನು ಸ್ಕೌಟ್ಸ್ ಮತ್ತು ಗೈಡ್ಸ್ ಮಾಡುತ್ತದೆ. ಸದ್ಯ ಬೆಂಗಳೂರಿನಲ್ಲಿ 25,000 ಮಕ್ಕಳು ಸ್ಕೌಟ್ಸ್ ಮತ್ತು ಗೈಡ್ಸ್ ನಲ್ಲಿದ್ದು ಈ ಬೇಸಿಗೆಯಲ್ಲಿ ಬೆಂಗಳೂರಿನಲ್ಲಿ ನೀರಿನ ತೊಂದರೆಯಾಗುವ ಮುನ್ಸೂಚನೆಗಳಿದ್ದು ಸ್ಕೌಟ್ಸ್ ಮತ್ತು ಗೈಡ್ಸ್ ನಿಂದ "ನೀರು ಉಳಿಸಿ" ಅಭಿಯಾನವನ್ನು ಹಮ್ಮಿಕೊಳ್ಳಲಾಗುವುದು ಎಂದು ಅವರು ಈ ಸಂದರ್ಭದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಉಪಾಧ್ಯಕ್ಷರಾದ ಕೊಂಡಜ್ಜಿ ಬ. ಷಣ್ಮುಖಪ್ಪ, ಟಿ.ಎಸ್. ಲೂಕಾಸ್ ಸೇರಿದಂತೆ ಅನೇಕ ಗಣ್ಯರು, ಶಿಕ್ಷಕರು ಹಾಗೂ ನೂರಾರು ಮಕ್ಕಳು ಭಾಗವಹಿಸಿದ್ದರು.

ಎಸ್ಎಂ/ಜಡಿ/ಕೆಎಂ

## ನೇಮಕ

ಬೆಂಗಳೂರು, ಫೆಬ್ರವರಿ 22, (ಕರ್ನಾಟಕ ವಾರ್ತೆ)

ಶ್ರೀ ಶ್ರೀವತ್ಸ ಕೃಷ್ಣ, ಐ.ಎ.ಎಸ್. ಅವರನ್ನು ಕಾರ್ಯದರ್ಶಿ ಸಾರ್ವಜನಿಕ ಉದ್ದಿಮೆಗಳ ಇಲಾಖೆಗೆ ನಿಯೋಜಿಸಿ ಸರ್ಕಾರ ಆದೇಶ ಹೊರಡಿಸಿದೆ.

ಎಸ್‌ಎಂ/ಕೆಎಂ